# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ: 05/06/2021 ರಂದು ಬೆಳಿಗ್ಗೆ 11.30 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಿಂಗಸಂದ್ರ ವಾರ್ಡ್ ಸಂಖ್ಯೆ-191 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ಪ್ರಸನ್ನಕುಮಾರ.ವಿ. ಉಪ-ಆಯುಕ್ತರು ರವರ ಸಮ್ಮುಖದಲ್ಲಿ ಅವರ ಅನುಮತಿಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ಪ್ರಾರಂಭದಲ್ಲಿ ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಎ.ಪಿ.ಶಿವುಕುಮಾರ್, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-191, ಸಿಂಗಸಂದ್ರ ರವರು ಸಭೆಗೆ ಹಾಜರಾಗಿದ್ದಂತಹ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

ಹಾಗೂ ಹಿಂದಿನ ಸಭೆಯ ನಡಾವಳಿಗಳನ್ನು ಸಭೆಯಲ್ಲಿ ಮಂಡಿಸಿ ಸಂಬಂಧಪಟ್ಟ ಅಧಿಕಾರಿಗಳಿಂದ ಹಿಂದಿನ ಸಭೆಯ ನಡಾವಳಿಗಳ ಪಾಲನೆಯ ಬಗ್ಗೆ ಮಾಹಿತಿ ಪಡೆಯಲಾಯಿತು. ಅದರಂತೆ ಇಂದಿನ ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು ಈ ಕೆಳಕಂಡಂತಿರುತ್ತದೆ.

1.ಕೋವಿಡ್-19 ಮಹಾಮಾರಿ ಸಾಂಕ್ರಮಿಕರೋಗ ಹರಡದಂತೆ ಮುಂಜಾಗ್ರತಕ್ರಮ ಕೈಗೊಳ್ಳಲು ತೆಗೆದುಕೊಳ್ಳಬಹುದಾದ ಕ್ರಮಗಳು.

2.ವಿಪತ್ತು ನಿರ್ವಹಣಾ ಸಮಿತಿ(ಡಿಸಾಸ್ಟರ್ ಮ್ಯಾನೇಜಮೆಂಟ್‌ಕಮಿಟಿ) ನಿರ್ವಹಿಸಬೇಕಾದ ಕ್ರಮಗಳ ಬಗ್ಗೆ.

3.ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವುದು.

4.ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸುವುದು,

5.ಮಳೆಯಿಂದ ಸಂಭವಿಸಿದ/ ಸಂಭವಿಸಬಹುದಾದ ಅನಾಹುತಗಳ ಬಗ್ಗೆ ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸುವುದು,

6.BWSSB Project ಮತ್ತು ನಿರ್ವಹಣೆಯ ಬಗ್ಗೆ ಚರ್ಚಿಸುವುದು,
7.ಕುಡಿಯುವನೀರು ಸರಬರಾಜು ಬಗ್ಗೆಚರ್ಚಿಸುವುದು,

8.ಗೇಲ್‌ಗ್ಯಾಸ್ ಪೈಪ್ ಲೈನ್ ನಿರ್ವಹಣೆಯ ಬಗ್ಗೆಚರ್ಚಿಸುವುದು,

ಸಭೆಯ ನಡಾವಳಿಗಳು

1. ರಾಮಾಂಜನೆಯ ಲೇಔಟ್‌ನಲ್ಲಿ ಕೂಡ ಒಳಚರಂಡಿ ವ್ಯವಸ್ಥೆ ಒಂದು ರೋಡ್‌ನಲ್ಲಿ ಮಾಡಿದ್ದು, ಇನ್ನು 2 ರೋಡ್‌ಗಳಲ್ಲಿ ಒಳಚರಂಡಿ ವ್ಯವಸ್ಥೆ ಕಾರ್ಯ ನಿರ್ವಹಿಸಿಲ್ಲವೆಂದು ಸ್ಥಳಿಯರು ದೂರನ್ನು ನೀಡಿದರು. ಹಾಗೆಯೇ ಕಾವೇರಿ ಲೇಔಟ್‌ನಲ್ಲಿ ಮೋರಿ ಮಾಡಿಲ್ಲ, ಮತ್ತು ರೋಡ್ ಕೂಡ ಮಾಡಿರುವುದಿಲ್ಲ ಎಂದು ಗ್ರಾಮಸ್ಥರ ದೂರಾಗಿತ್ತು. ಅದಕ್ಕೆ ನೋಡಲ್ ಅಧಿಕಾರಿಗಳು ಬಿ,ಡಬ್ಲ್ಯೂ.ಎಸ್.ಎಸ್.ಬಿ. ಎ.ಇ ಮತ್ತು ಎ.ಇ.ಇ ರವರಿಗೆ ಅಲ್ಲಿಯ ಸಮಸ್ಯೆಯನ್ನು ಬಗೆಹರಿಸಲು ಸೂಚಿಸಿದರು. ಹಾಗೆಯೇ ಕಾವೇರಿ ನೀರಿನ ಕನೆಕ್ಷನ್ ಕೊಟ್ಟು 2 ವರ್ಷವಾಗಿದ್ದು, ಇನ್ನೂ ನೀರಿನ ವ್ಯವಸ್ಥೆ ಮಾಡಿಲ್ಲವೆಂದು ಸ್ಥಳಿಯರು ವಿಚಾರಿಸಿದರು. ಅದೆಲ್ಲವನ್ನು ಚೆಕ್ ಮಾಡಿ ಕುಡಿಯುವ ನೀರಿನ ವ್ಯವಸ್ಥೆ ಮಾಡಿಕೊಡಲು ನೋಡಲ್ ಅಧಿಕಾರಿಗಳು ಸೂಚಿಸಿದರು.

2. ಸಾಯಿಬಾಬಾ ಲೇಔಟ್ ಮೀನಾಕ್ಷಿ ಲೇಔಟ್ ಎದುರು ಕುಡಿಯುವ ನೀರಿನ ಸಮಸ್ಯೆ ಇದೆ ಎಂದು ಸ್ಥಳಿಯರು ತಮ್ಮ ಅಳಲನ್ನು ತೋಡಿಕೊಂಡರು. ಬಿ,ಡಬ್ಲ್ಯೂ.ಎಸ್.ಎಸ್.ಬಿ. ಎ.ಇ ರವರಿಗೆ ನೋಡಲ್ ಅಧಿಕಾರಿಗಳು ನೀರಿನ ವ್ಯವಸ್ಥೆ ಮಾಡಿಕೊಡಲು ಸೂಚಿಸಿದರು.

3. ಪಿ.ಎಂ. ಸ್ವಾನಿಧಿ ಸ್ಕೀಮ್ ನಲ್ಲಿ ಬೀದಿ ಬದಿ ವ್ಯಾಪಾರ ಮಾಡುವವರಿಗೆ ಸಾಲ ನೀಡಲು ನೋಡಲ್ ಅಧಿಕಾರಿಗಳು ಸಹಾಯಕ ಕಂದಾಯ ಅಧಿಕಾರಿಗಳಿಗೆ ಸೂಚಿಸಿದರು.

4. ಸಿಲ್ವರ್ ಕೌಂಟಿ ಮುಖ್ಯರಸ್ತೆ (ಮೇಜರ್ ರೋಡ್) ಎರಡು ಬದಿಯಲ್ಲಿ ಚರಂಡಿ ನಿರ್ಮಿಸಿ ರಸ್ತೆ ಡಾಂಬರೀಕರಣ ಕಾಮಗಾರಿ ಪ್ರಗತಿಯಲ್ಲಿದ್ದು, ರಸ್ತೆಯ ಮಧ್ಯಭಾಗದಲ್ಲಿ ವಿದ್ಯುತ್ ಕಂಬಗಳು ಇದ್ದು, ಸಾರ್ವಜನಕರಿಗೆ ಹಾಗೂ ವಾಹನ ಸಂಚಾರಕರಿಗೆ ತುಂಬಾ ತೊಂದರೆಯಾಗುತ್ತಿದ್ದು, ಸದರಿ ವಿದ್ಯುತ್ ಕಂಬಗಳನ್ನು

ಬೆಸ್ಕಾಂ ಅಧಿಕಾರಿಗಳಿಗೆ ತಮ್ಮ ಕಛೇರಿಯ ಅನುದಾನದಿಂದ ಕಾಮಗಾರಿ ನಿರ್ವಹಿಸಿಕೊಡಲು ನೋಡಲ್ ಅಧಿಕಾರಿಗಳು ವಾರ್ಡ್ ಸಮಿತಿ ಸಭೆಯಲ್ಲಿ ಇ.ಇ ಬೆಸ್ಕಾಂ ಅವರಿಗೆ ಸೂಚಿಸಲಾಯಿತು.

5. ಕೋವಿಡ್- 19 ಕರೋನಾ ರೋಗವು 2ನೇ ಹಂತದಲ್ಲಿ ಹರಡುತ್ತಿದ್ದು, ವಾರ್ಡ್ ವ್ಯಾಪ್ತಿಯಲ್ಲಿ 18 ವರ್ಷ ಮೇಲ್ಪಟ್ಟ ಸಾರ್ವಜನಿಕರು ಕೋವೀಡ್ ವ್ಯಾಕ್ಸಿನ್ ಚುಚುಮದ್ದು ನೀಡಲು ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳಿಗೆ ವಾರ್ಡ್ ಸಮಿತಿ ಸಭೆಯಲ್ಲಿ ನೋಡಲ್ ಅಧಿಕಾರಿಗಳು ಸೂಚಿಸಿದರು.

6. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಬೀದಿದೀಪಗಳು ಹಾಳಾಗಿದ್ದು, ದುರಸ್ತಿಯಲ್ಲಿದ್ದು, ಅವುಗಳನ್ನು ಸರಿಪಡಿಸಲು ಮತ್ತು ಹೊಸದಾಗಿ ವಿದ್ಯುತ್ ಬೀದಿದೀಪಗಳು ಅವಶ್ಯಕತೆ ಇದ್ದು, ಬೀದಿದೀಪಗಳನ್ನು ಅಳವಡಿಸಲು ಬೀದಿದೀಪದ ಎ.ಇ ರವರಿಗೆ ನೋಡಲ್ ಅಧಿಕಾರಿಗಳು ವಾರ್ಡ್ ಸಮಿತಿ ಸಭೆಯಲ್ಲಿ ಸೂಚಿಸಿದರು.

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ -191 ಸಿಂಗಸಂದ್ರ

ಅಧ್ಯಕ್ಷರು
ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ 191, ಸಿಂಗಸಂದ್ರ

**ಪ್ರತಿಗಳು:-**

1) ಮಾನ್ಯ ಆಡಳಿತಗಾರರು, ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
2) ಮಾನ್ಯ ಆಯುಕ್ತರು, ಬೃ.ಬೆಂ.ಮ.ಪಾಲಿಕೆ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
3) ಮಾನ್ಯ ಶಾಸಕರು, ಬೊಮ್ಮನಹಳ್ಳಿ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ
4) ಮಾನ್ಯ ಶಾಸಕರು, ಬೆಂಗಳೂರು ದಕ್ಷಿಣ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ
5) ಮಾನ್ಯ ಶಾಸಕರು, ಆನೇಕಲ್ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ

6) ವಲಯ ಆಯುಕ್ತರು, ಬೊಮ್ಮನಹಳ್ಳಿ ವಲಯ, ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ

7) ಜಂಟಿ ಆಯುಕ್ತರು, ಬೊಮ್ಮನಹಳ್ಳಿ ವಲಯರವರ ಅವಗಾಹನೆಗೆ ಮಂಡಿಸಿದೆ.

8) ಉಪ ಆಯುಕ್ತರು, ಬೊಮ್ಮನಹಳ್ಳಿ ವಲಯರವರ ಅವಗಾಹನೆಗೆ ಮಂಡಿಸಿದೆ

9) ಮುಖ್ಯ ಅಭಿಯಂತರರು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ

10ಆರೋಗ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ

11) ಅರಣ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ

12) ಡಿ.ಜಿ.ಎಂ. ಗೇಲ್‌ಗ್ಯಾಸ್‌ರವರಿಗೆ ಮುಂದಿನ ಕ್ರಮಕ್ಕಾಗಿ,

13) ಮುಖ್ಯಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರ ಅವಗಾಹನೆಗೆ ಕಳುಹಿಸಿದೆ

14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕಾಗಿ

15)ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಎಂ.ಆರ್.ಸಿ.ಎಲ್ ರವರಿಗೆ ಮುಂದಿನ ಕ್ರಮಕ್ಕಾಗಿ

16) ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ, ಬೃ.ಬೆಂ.ಮ.ಪಾ. ರವರಿಗೆ ಮುಂದಿನ ಕ್ರಮಕ್ಕಾಗಿ

17) ಪಿ.ಎಸ್.ಐ. ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ, ಪರಪ್ಪನಅಗ್ರಹಾರಠಾಣೆ,

18) ಕಂದಾಯಅಧಿಕಾರಿ (ಬೇಗೂರು) ವಲಯರವರ ಅವಗಾಹನೆಗೆ ಮಂಡಿಸಿದೆ

19) ವಾರ್ಡ್ ಸಮಿತಿ ಸದಸ್ಯರುರವರಿಗೆ ಕಳುಹಿಸಲಾಗಿದೆ.

20)ಕಛೇರಿಕಡತಕ್ಕೆ